## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಮ್ಮೂರ ಶಾಲೆಗೆ ನಮ್ಮ ಯುವಜನರು ಕಾರ್ಯಕ್ರಮದ ಮಾರ್ಗಸೂಚಿಯನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಯುಸೇಇ 53 ಯುಸೇಕ್ರೀ 2013, ದಿನಾಂಕ:26.11.2013

2. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ:ಯುಸಕ್ರೀಇ/ಯುನಿ/ನಶಾನಯು/01/2017-18, ದಿನಾಂಕ:06.04.2017.

******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದನ್ವಯ ಈಗಾಗಲೇ ರಾಜ್ಯದಲ್ಲಿ ಯುವ ನೀತಿ ಅನುಷ್ಠಾನ ಅಡಿಯಲ್ಲಿ **"ನಮ್ಮೂರ ಶಾಲೆಗೆ ನಮ್ಮ ಯುವಜನರು"** ಕಾರ್ಯಕ್ರಮವನ್ನು 2013ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಮೇಲೆ ಓದಲಾದ (2)ರ ದಿನಾಂಕ: 01.04.2017ರ ಪತ್ರದಲ್ಲಿ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ನೊಂದಾವಣೆಗೊಂಡಿರುವ ಸಂಘ ಸಂಸ್ಥೆಗಳ ಕಾರ್ಯವ್ಯಾಪ್ತಿಯಲ್ಲಿರುವ ಒಂದು ಸರ್ಕಾರಿ ಶಾಲೆಯನ್ನು ಆಯ್ಕೆ ಮಾಡಿಕೊಂಡು ಭೌತಿಕ ಹಾಗೂ ಭೌದ್ಧಿಕ ಚಟುವಟಿಕೆಗಳನ್ನು ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡ ಅರ್ಹ ಸಂಸ್ಥೆಗಳಿಗೆ ತಾಲ್ಲೂಕಿಗೆ ಒಂದರಂತೆ ಒಂದು ಯುವಕ/ಯುವತಿ ಸಂಘಕ್ಕೆ ರೂ.1.00 ಲಕ್ಷದಂತೆ ಸರ್ಕಾರದಿಂದ ಪ್ರೋತ್ಸಾಹಧನ ನೀಡಲಾಗುತ್ತಿದೆ. 2017-18ನೇ ಸಾಲಿನಿಂದ ಯುವ ಚೈತನ್ಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿರುವುದರಿಂದ **"ನಮ್ಮೂರ ಶಾಲೆಗೆ ನಮ್ಮ ಯುವಜನರು"** ಕಾರ್ಯಕ್ರಮದ ಮಾರ್ಗಸೂಚಿಯನ್ನು ಪರಿಷ್ಕರಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 123 ಯುಸೇಕ್ರೀ 2017**

**ಬೆಂಗಳೂರು, ದಿನಾಂಕ:15.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, **"ನಮ್ಮೂರ ಶಾಲೆಗೆ ನಮ್ಮ ಯುವಜನರು"** ಕಾರ್ಯಕ್ರಮದ ಮಾರ್ಗಸೂಚಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

**1) ಫಲಾನುಭವಿ:**

ಅ) ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದಿರುವ ಕ್ರೀಡಾ ಸಂಸ್ಥೆಗಳು ಆಯೋಜಿಸುವ ತಾಲ್ಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಿ ಆಯ್ಕೆಯಾದ ಪ್ರತಿ ಶಾಲೆಗೆ ಪ್ರೋತ್ಸಾಹವಾಗಿ ರೂ.1.00 ಲಕ್ಷಗಳ ಅನುದಾನ ನೀಡುವುದು.

ಆ) ಈ ಪೈಕಿ ರೂ.10,000/-ಗಳನ್ನು ಸದರಿ ಶಾಲೆಯ ದೈಹಿಕ ಶಿಕ್ಷಕರಿಗೆ ಪ್ರೋತ್ಸಾಹಧನವಾಗಿ ಮತ್ತು ರೂ.90,000/-ಗಳನ್ನು ಶಾಲೆಯ ಎಸ್.ಡಿ.ಎಂ.ಸಿ.ಗೆ ಅಗತ್ಯ ಕ್ರೀಡಾ ಸಾಮಾಗ್ರಿಗಳ ಪೂರೈಕೆಗಾಗಿ ಅನುದಾನ ರೂಪದಲ್ಲಿ ನೀಡುವುದು.

Date 17.5.2017
Officer/ Section DD (YP)
Director

2) ಆಯ್ಕೆ ವಿಧಾನ:

ಅ) ಪ್ರಸ್ತುತ ಇರುವ ಆಯ್ಕೆ ಸಮಿತಿಯನ್ನು ಕೈಬಿಟ್ಟು ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಆಯ್ಕೆ ಮಾಡುವುದು.

ಆ) ಆಯಾ ತಾಲ್ಲೂಕಿನಲ್ಲಿ ಹಿಂದಿನ ಸಾಲಿನಲ್ಲಿ ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿರುವ ಹೆಚ್ಚಿನ ಸಂಖ್ಯೆಯ ಕ್ರೀಡಾಪಟುಗಳನ್ನು ಹೊಂದಿದ ಸರ್ಕಾರಿ ಶಾಲೆಗಳ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸಿ ಆಯ್ಕೆ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2017, ದಿನಾಂಕ:05.04.2017ರಲ್ಲಿ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತು ಅವರ ಹೆಸರಿನಲ್ಲಿ,

(ಆರ್.ಪ್ರಭುಶಂಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಅಂಚೆ ಪೆಟ್ಟಿಗೆ ಸಂಖ್ಯೆ-5329, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಜಿ & ಎಸ್.ಎಸ್.ಎ), ಕರ್ನಾಟಕ, ಅಂಚೆ ಪೆಟ್ಟಿಗೆ ಸಂಖ್ಯೆ-5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಇ & ಆರ್.ಎಸ್.ಎ), ಕರ್ನಾಟಕ, ಅಂಚೆ ಪೆಟ್ಟಿಗೆ ಸಂಖ್ಯೆ-5398, ಬೆಂಗಳೂರು.
4. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
5. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಅಧ್ಯಕ್ಷರು, ಕೊಡಗು ಜಿಲ್ಲಾ ಮುಸ್ಲಿಂ ಸ್ಪೋರ್ಟ್ಸ್ ಅಸೋಸಿಯೇಷನ್ (ರಿ), ಮಡಿಕೇರಿ ರಸ್ತೆ, ಮುರ್ನಾಡ್, ಕೊಡಗು ಜಿಲ್ಲೆ-571252.
8. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-7/8), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.